# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 71 (88) |
| ಸದಸ್ಯರ ಹೆಸರು | :ಶ್ರೀಮತಿ. ಬಲ್ಕೀಸ್ ಬಾನು (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು |
| ಉತ್ತರಿಸಬೇಕಾದ ದಿನಾಂಕ | : 27.01.2026 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಅಡಿಕೆ ಬೆಳೆಗಳಲ್ಲಿ ಲೀಫ್ ಸ್ಪಾಟ್ (Leaf Spot) ರೋಗದಿಂದ ರೈತರಿಗೆ ತೊಂದರೆ ಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: | ಗಮನಕ್ಕೆ ಬಂದಿರುತ್ತದೆ. |
| ಆ) | ಲೀಫ್ ಸ್ಪಾಟ್ ರೋಗದಿಂದ ನಷ್ಟ ಅನುಭವಿಸುತ್ತಿದ್ದು, ರೋಗ ನಿಯಂತ್ರಿಸಲು ತೆಗೆದುಕೊಂಡಿರುವ ಕ್ರಮಗಳೇನು; (ವಿವರ ನೀಡುವುದು) | ಅಡಿಕೆ ಬೆಳೆಯ ಎಲೆಚುಕ್ಕೆ ರೋಗ ನಿಯಂತ್ರಿಸಲು ತೋಟಗಾರಿಕೆ ಇಲಾಖೆಯಿಂದ ತೆಗೆದುಕೊಂಡ ಕ್ರಮಗಳು ಈ ಕೆಳಗಿನಂತಿವೆ:<br><br>1. 2025-26 ನೇ ಸಾಲಿನಲ್ಲಿ MIDH ಮಾರ್ಗಸೂಚಿಯನ್ವಯ ರಾಷ್ಟ್ರೀಯ ತೋಟಗಾರಿಕೆ ಮಿಶನ್ ಯೋಜನೆಯ "Special Interventions" ಕಾರ್ಯಕ್ರಮದಡಿ ಅಡಿಕೆ ಬೆಳೆಯಲ್ಲಿ ಎಲೆಚುಕ್ಕೆ ರೋಗದ ನಿಯಂತ್ರಣ ಕಾರ್ಯಕ್ರಮದಡಿ ಸಮಗ್ರ ರೋಗ/ಕೀಟಗಳ ಹಾಗೂ ಪೋಷಕಾಂಶಗಳ ನಿರ್ವಹಣೆಗಾಗಿ ಪ್ರತಿ ಹೆಕ್ಟೇರಿಗೆ ತಗಲುವ ರೂ 5000/- ಗಳಲ್ಲಿ ಶೇ.30 ರಂತೆ ಪ್ರತಿ ಹೆಕ್ಟೇರಿಗೆ ರೂ.1500/- ದರದಲ್ಲಿ 2 ಹೆಕ್ಟೇರ್ ರವರೆಗೆ ರೂ.3000/- ಗಳ ಸಹಾಯಧನ ನೀಡಲಾಗುತ್ತಿದೆ. ಈ ಬಾಬ್ತು ರೂ.860.65 ಲಕ್ಷಗಳ ಅನುದಾನ ನಿಗದಿಯಾಗಿದೆ. ಈವರೆಗೂ 14115 ರೈತರಿಗೆ ರೂ.452.61 ಲಕ್ಷಗಳ ಸಹಾಯಧನ ನೀಡಲಾಗಿರುತ್ತದೆ. ಕಾರ್ಯಕ್ರಮ ಪ್ರಗತಿಯಲ್ಲಿರುತ್ತದೆ.<br><br>2. ಮುಂಗಾರು ಮತ್ತು ಹಿಂಗಾರು ಹಂಗಾಮುಗಳಿಗೆ ಮರುವಿನ್ಯಾಸಗೊಳಿಸಲಾದ ಹವಾಮಾನ ಆಧಾರಿತ ಬೆಳೆವಿಮೆ ಯೋಜನೆಯಡಿ ಅಡಿಕೆ ಬೆಳೆಯು ಅಧಿಸೂಚಿತವಾಗಿದ್ದು, ಹವಾಮಾನ ವೈಪರೀತ್ಯದಿಂದ ಬೆಳೆ ನಷ್ಟ ಸಂಭವಿಸಿದಲ್ಲಿ ವಿಮಾ ಪರಿಹಾರವನ್ನು ಒದಗಿಸಲಾಗುತ್ತಿದೆ. |
| ಇ) | ರೋಗ ನಿಯಂತ್ರಣ ಕ್ರಮಗಳನ್ನು ಅನುಸರಿಸಲು ರೈತರಿಗೆ ಮಾಹಿತಿ ನೀಡಲು ಯಾವ ಕ್ರಮಗಳನ್ನು ಕೈಗೊಳ್ಳಲಾಗಿದೆ; (ವಿವರ ನೀಡುವುದು) | |

| ಕ್ರ. ಸಂ. | 2024-2025 ನೇ ಸಾಲಿನ ಬೆಳೆ ವಿಮೆ ವಿವರ | ಅಡಿಕೆ ಬೆಳೆಯುವ ಜಿಲ್ಲೆಗಳಿಗೆ |
|---|---|---|
| 1. | ಅರ್ಜಿಗಳ ಸ್ವೀಕೃತ (ಸಂಖ್ಯೆ) | 528705 |

| | | |
|---|---|---|
| 2. | ವಿಸ್ತೀರ್ಣ (Covered) ಹೆಕ್ಟೇರ್ ಗಳಲ್ಲಿ | 173060.42 |
| 3. | ವಿಮಾ ಮೊತ್ತ (Sum insured) (Amount in Lakhs) | 221517.33 |
| 4. | ಪಾವತಿಸಲಾದ ವಿಮಾ ಮೊತ್ತ (Claim amount in Lakhs) | 47254.13 |
| 5. | ಫಲಾನುಭವಿಗಳ ಸಂಖ್ಯೆ | 365920 |
| 6. | 2025-2026 ನೇ ಸಾಲಿನ ಬೆಳೆ ವಿಮೆ ಅರ್ಜಿಗಳ ಸ್ವೀಕೃತ (ಸಂಖ್ಯೆ) | 652440 |

3. ಪ್ರಸಕ್ತ ಸಾಲಿನಲ್ಲಿ ಅಡಿಕೆ ಬೆಳೆಗೆ ಬಾಧಿಸುವ ಎಲೆಚುಕ್ಕೆ ರೋಗ, ಹಳದಿ ಎಲೆ ರೋಗ ಹಾಗೂ ಕೊಳೆ ರೋಗಗಳ ನಿರ್ವಹಣೆಗಾಗಿ ಫೈಟೋಸಾನಿಟರಿ (Phytosanitory) ಕ್ರಮಗಳ ಅಳವಡಿಕೆ (ರೋಗ ಬಾಧಿತ ಸಸ್ಯದ ಭಾಗಗಳನ್ನು ತೆಗೆಯುವುದು ಮತ್ತು ನಾಶಪಡಿಸುವುದು), ಸಸ್ಯ ಸಂರಕ್ಷಣಾ ಕ್ರಮಗಳು ಹಾಗೂ ಪೋಷಕಾಂಶಗಳ ಸಮಗ್ರ ನಿರ್ವಹಣೆಗೆ ಸಹಾಯಧನಕ್ಕಾಗಿ ಒಟ್ಟಾರೆ ರೂ.57776.33 ಲಕ್ಷಗಳ ಪ್ರಸ್ತಾವನೆಯನ್ನು ಸಿದ್ದಪಡಿಸಲಾಗಿದೆ. ಇದರಲ್ಲಿ MIDH ಮಾರ್ಗಸೂಚಿಯನ್ವಯ ಶೇ.30 ರಷ್ಟು ಸಹಾಯಧನದಂತೆ ಒಟ್ಟು ರೂ.17332.90 ಲಕ್ಷಗಳನ್ನು (ಕೇಂದ್ರ ಪಾಲು ರೂ.10399.74 ಲಕ್ಷಗಳು ಹಾಗೂ ರಾಜ್ಯ ಪಾಲು ರೂ.6933.14 ಲಕ್ಷಗಳು) ಕೋರಿ ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿದೆ.

4. ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಶಿವಮೊಗ್ಗದ ತಜ್ಞರು ಹಾಗೂ ಇಲಾಖೆಯ ಅಧಿಕಾರಿಗಳ ಸಹಯೋಗದೊಂದಿಗೆ ಕೈಪಿಡಿ, ಕರಪತ್ರಗಳು ಮತ್ತಿತರೆ ಸಮೂಹ ಮಾಧ್ಯಮಗಳ ಮೂಲಕ ಅಡಿಕೆ ತೋಟಗಳ ಪೋಷಕಾಂಶ ನಿರ್ವಹಣೆ, ಬಸಿ ಕಾಲುವೆಗಳನ್ನು ಮಾಡುವುದು, ಹಸಿರೆಲೆ ಗೊಬ್ಬರದ ಬಳಕೆ ಹಾಗೂ ರಸ ಗೊಬ್ಬರಗಳ ಪೂರೈಕೆಗಳ ಕುರಿತು ಕೈಪಿಡಿ, ಕರಪತ್ರಗಳು ಮತ್ತಿತರೆ ಸಮೂಹ ಮಾಧ್ಯಮಗಳ ಮೂಲಕ ಪ್ರಚಾರ ಕೈಗೊಳ್ಳಲಾಗುತ್ತಿದೆ ಹಾಗೂ ತರಬೇತಿ/ ಕಾರ್ಯಾಗಾರಗಳ ಮೂಲಕ ರೈತರಿಗೆ ಅರಿವು ಮೂಡಿಸಲಾಗುತ್ತಿದೆ.

| | | |
|---|---|---|
| ಈ) | ಅಡಿಕೆ ಬೆಳೆಗಳಲ್ಲಿ ಉಂಟಾಗುವ ರೋಗಗಳ ನಿಯಂತ್ರಣ ಹಾಗೂ ರೋಗ ನಿರೋಧಕ ಸಂಶೋಧನೆಗಾಗಿ ಸರ್ಕಾರದ ಕ್ರಮವೇನು: ಇದಕ್ಕಾಗಿ ಸರ್ಕಾರ ಅನುದಾನ ಮೀಸಲಿಟ್ಟಿದೆಯೇ? | ಅಡಿಕೆ ಬೆಳೆಯ ರೋಗಗಳ ನಿಯಂತ್ರಿಸಲು ಸಂಶೋಧನೆಗಾಗಿ ಕೈಗೊಂಡ ಕ್ರಮಗಳು ಕೆಳಗಿನಂತಿವೆ.<br><br>1. 2023-24ನೇ ಸಾಲಿನಲ್ಲಿ ರೂ.43.61/- ಲಕ್ಷಗಳನ್ನು ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಶಿವಮೊಗ್ಗ ರವರಿಗೆ ಒದಗಿಸಲಾಗಿದೆ. ರೈತರ ತಾಕುಗಳಲ್ಲಿ ಹೊಸ ತಂತ್ರಜ್ಞಾನಗಳನ್ನು ಅಳವಡಿಸಿ ಸಂಶೋಧನೆಗಾಗಿ ಶಿವಮೊಗ್ಗ ಹಾಗೂ ಚಿಕ್ಕಮಗಳೂರು ಜಿಲ್ಲೆಗಳಲ್ಲಿ 8 ಪ್ರಾತ್ಯಕ್ಷತೆಗಳನ್ನು ಕೈಗೊಳ್ಳಲಾಗಿರುತ್ತದೆ. ಈ ಅಧ್ಯಯನದಿಂದ ಸಮಗ್ರ ರೋಗ ನಿರ್ವಹಣೆಗಾಗಿ ಉತ್ತಮ ಕೃಷಿ ಪದ್ಧತಿಗಳನ್ನು ಅಳವಡಿಸಿಕೊಳ್ಳುವುದರ ಜೊತೆಗೆ ಸಮುದಾಯ ಮಟ್ಟದಲ್ಲಿ ಶಿಲೀಂಧ್ರ ನಾಶಕಗಳ ಸಕಾಲಿಕ ಸಿಂಪರಣೆ ಮಾಡುವುದರಿಂದ, ಶಿಲೀಂಧ್ರದ ಸೋಂಕು, ರೋಗದ ಉಲ್ಬಣ ಮತ್ತು ಹರಡುವಿಕೆಯನ್ನು ಕಡಿಮೆ ಮಾಡಲು ಸಹಾಯಕವಾಗುತ್ತದೆಂದು ವರದಿ ಮಾಡಲಾಗಿರುತ್ತದೆ. ಈ ಕುರಿತು ರೈತರಿಗೆ ಅರಿವು ಮೂಡಿಸಲಾಗುತ್ತಿದೆ<br>2. ಹಳದಿ ಎಲೆ ರೋಗ ಬಾಧೆಗೆ ನಿರ್ಧಿಷ್ಟವಾದ ಕಾರಣಗಳನ್ನು ಕಂಡು ಹಿಡಿಯಲು ಕೇಂದ್ರೀಯ ತೋಟದ ಬೆಳೆಗಳ ಸಂಶೋಧನಾ ಕೇಂದ್ರ (CPCRI) ವಿಟ್ಲ, ದಕ್ಷಿಣ ಕನ್ನಡ ರವರಿಗೆ ರೂ.50.00 ಲಕ್ಷಗಳ ಅನುದಾನವನ್ನು ಪ್ರಯೋಗಾಲಯದ ಉನ್ನತೀಕರಣಕ್ಕಾಗಿ ಒದಗಿಸಲಾಗಿದೆ. ಇದರಿಂದ ರೋಗವನ್ನು ತುರ್ತಾಗಿ ಕಂಡು ಹಿಡಿಯಲು ಸಹಕಾರಿಯಾಗುತ್ತಿದೆ.<br>3. ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ, ಶಿವಮೊಗ್ಗದ ತಜ್ಞರು ಹಾಗೂ ಇಲಾಖೆಯ ಅಧಿಕಾರಿಗಳ ಸಹಯೋಗದೊಂದಿಗೆ ಕೈಪಿಡಿ, ಕರಪತ್ರಗಳು ಮತ್ತಿತರೆ ಸಮೂಹ ಮಾಧ್ಯಮಗಳ ಮೂಲಕ ಅಡಿಕೆ ತೋಟಗಳ ಪೋಷಕಾಂಶ ನಿರ್ವಹಣೆ, ಬಸಿ ಕಾಲುವೆಗಳನ್ನು ಮಾಡುವುದು, ಹಸಿರೆಲೆ ಗೊಬ್ಬರದ ಬಳಕೆ ಹಾಗೂ ರಸ ಗೊಬ್ಬರಗಳ ಪೂರೈಕೆಗಳ ಕುರಿತು ಕೈಪಿಡಿ, ಕರಪತ್ರಗಳು ಮತ್ತಿತರೆ ಸಮೂಹ ಮಾಧ್ಯಮಗಳ ಮೂಲಕ ಪ್ರಚಾರ ಕೈಗೊಳ್ಳಲಾಗುತ್ತಿದೆ ಹಾಗೂ ತರಬೇತಿ/ ಕಾರ್ಯಾಗಾರಗಳ ಮೂಲಕ ರೈತರಿಗೆ ಅರಿವು ಮೂಡಿಸಲಾಗುತ್ತಿದೆ. |

**ಸಂಖ್ಯೆ: HORTI 33 HGM 2026**

**(ಎಸ್. ಎಸ್. ಮಲ್ಲಿಕಾರ್ಜುನ್)**

**ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು**